## ಕರ್ನಾಟಕಸರ್ಕಾರದನಡವಳಿಗಳು

**ವಿಷಯ:** ಗಂಗಾ ಕಲ್ಯಾಣ ಯೋಜನೆಯ ಕೊಳವೆ ಬಾವಿಗಳಿಗೆ ಅಭಿವೃದ್ಧಿ ನಿಗಮಗಳ ವತಿಯಿಂದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಬಿಡುಗಡೆಗೊಳಿಸುತ್ತಿರುವ ವಿದ್ಯುದ್ದೀಕರಣ ಮೂಲ ಸೌಕರ್ಯ ಶುಲ್ಕವನ್ನು ರೂ.50,000/- ರಿಂದ ರೂ.75,000/-ಗಳಿಗೆ ಹೆಚ್ಚಿಸುವ ಬಗ್ಗೆ

**ಓದಲಾಗಿದೆ: 1.** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಇಂಧನ ಇಲಾಖೆ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಇಎನ್/42/ವಿಎನ್ ಸಿ/2022, ದಿನಾಂಕ:02.01.2023.

**2.** ಸರ್ಕಾರದ ಅಧೀನ ಕಾರ್ಯದರ್ಶಿಗಳು, ಇಂಧನ ಇಲಾಖೆ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ:ಎನರ್ಜಿ 42 ವಿಎಸ್ ಸಿ 2022, ದಿನಾಂಕ:05.06.2023.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರು ಅಭಿವೃದ್ಧಿ ನಿಗಮಗಳ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಲಾಗುವ ಕೊಳವೆ ಬಾವಿಗಳಿಗೆ ಬಿಡುಗಡೆಗೊಳಿಸುತ್ತಿರುವ ಮೂಲ ಸೌಕರ್ಯ ವಿದ್ಯುದ್ದೀಕರಣ ವೆಚ್ಚವನ್ನು ರೂ.50,000/- ಗಳಿಂದ ರೂ.75,000/-ಗಳಿಗೆ ಹೆಚ್ಚಿಸಿ ಬಿಡುಗಡೆ ಮಾಡುವಂತೆ ದಿನಾಂಕ:10.01.2022 ರಂದು ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ತಿಳಿಸಿ ಈ ಬಗ್ಗೆ ಅಲ್ಪಸಂಖ್ಯಾತ ಇಲಾಖೆ ಮಾತ್ರ ಆದೇಶ ಹೊರಡಿಸಿರುತ್ತದೆ. ಆದರೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಇಲಾಖೆಗಳು ಆದೇಶ ಹೊರಡಿಸುವುದು ಬಾಕಿ ಇರುವುದರಿಂದ ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಲಾಗುವ ಕೊಳವೆ ಬಾವಿಗಳಿಗೆ ಅಭಿವೃದ್ಧಿ ನಿಗಮಗಳ ವತಿಯಿಂದ ಬಿಡುಗಡೆಗೊಳಿಸುತ್ತಿರುವ ಮೂಲ ಸೌಕರ್ಯ ವಿದ್ಯುದ್ದೀಕರಣ ವೆಚ್ಚವನ್ನು ರೂ.50,000/-ಗಳಿಂದ ರೂ.75,000/- ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(2)ರ ಪತ್ರದಲ್ಲಿ ಕೊಳವೆ ಬಾವಿಗಳ ವಿದ್ಯುದ್ದೀಕರಣ ವೆಚ್ಚವನ್ನು ರೂ.50,000/- ಗಳಿಂದ ರೂ.75,000/-ಗಳಿಗೆ ಹೆಚ್ಚಿಸಲು ಅನುವಾಗಲು ಗಂಗಾ ಕಲ್ಯಾಣ ಕೊಳವೆ ಬಾವಿಗಳ unit rate ನ್ನು ರೂ.3.00 ಲಕ್ಷದಿಂದ ರೂ.3.25 ಲಕ್ಷ ಹಾಗೂ ರೂ.4.00 ಲಕ್ಷದಿಂದ ರೂ.4.25 ಲಕ್ಷದವರೆಗೆ ಹೆಚ್ಚಿಸಿ ಆರ್ಥಿಕ ಇಲಾಖೆಯು ಸಹಮತಿ ನೀಡಿರುವುದಾಗಿ ತಿಳಿಸಿರುತ್ತಾರೆ. ಅಭಿವೃದ್ಧಿ ನಿಗಮಗಳ ವತಿಯಿಂದ ಪ್ರತಿ ಗಂಗಾ ಕಲ್ಯಾಣ ಕೊಳವೆ ಬಾವಿಗಳ ಪಂಪ್ ಸೆಟ್ ಒಂದಕ್ಕೆ ವಿದ್ಯುತ್ ಸಬರಾಜು ಕಂಪನಿಗಳಿಗೆ ಬಿಡುಗಡೆಗೊಳಿಸುತ್ತಿರುವ ರೂ.50,000/- ಗಳ ವಿದ್ಯುದ್ದೀಕರಣ ಮೂಲ ಸೌಕರ್ಯ ಶುಲ್ಕವನ್ನು ರೂ.75,000/- ಗಳಿಗೆ ಹೆಚ್ಚಿಸಿ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

---2



Generated from eOffice by KUMAR, SWD-DS3-ASST(KS), ASSISTANT, SOCIAL WELFARE SEC on 28/08/2023 05:51 PM

ಈ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 60 ಎಸ್‌ಡಿಸಿ 2023, ಬೆಂಗಳೂರು, ದಿನಾಂಕ: 17.07.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಕಾರಣಗಳಿಂದ, ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಲಾಗುವ ಕೊಳವೆ ಬಾವಿಗಳಿಗೆ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯ ಅಭಿವೃದ್ಧಿ ನಿಗಮಗಳ ವತಿಯಿಂದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಬಿಡುಗಡೆಗೊಳಿಸುತ್ತಿರುವ ವಿದ್ಯುದ್ಧೀಕರಣ ಮೂಲ ಸೌಕರ್ಯ ಶುಲ್ಕವನ್ನು ರೂ.50,000/- ದಿಂದ ರೂ.75,000/-ಕ್ಕೆ ಹೆಚ್ಚಿಸಿ ಅನುಮೋದನೆ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶಿವಶಂಕರ್ ನಾಯಕ್.ಎಲ್)
ಸರ್ಕಾರದ ಉಪ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಬೆಂಗಳೂರು
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ, ಬೆಂಗಳೂರು
7. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಮಾಹಿತಿಗಾಗಿ:-**

1. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನಸೌಧ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಧಾನಸೌಧ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಉಪಕಾರ್ಯದರ್ಶಿ ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

ಮೆಮೋ: ಪ್ರವ್ಯ(ತಾ)/ಉಪ್ರವ್ಯ(ತಾ)/ಸಪ್ರವ್ಯ(ತಾ)-1/ವ್ಯ(ತಾ)-1/2023-24 / cys-724 ದಿನಾಂಕ: 02 SEP 2023

ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ

1. ಮುಖ್ಯ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನಾ ವಲಯ, ಚಾ.ವಿ.ಸ.ನಿ.ನಿ., ಮೈಸೂರು/ಹಾಸನ.
2. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ), ಚಾವಿಸನಿನಿ, ಕಾರ್ಯ ಮತ್ತು ಪಾಲನಾ ವೃತ್ತ,
3. ಉಪ ಪ್ರಧಾನ ವ್ಯವಸ್ಥಾಪಕರು,(ಎಂ.ಐ.ಎಸ್), ನಿಗಮ ಕಛೇರಿ, ಚಾವಿಸನಿನಿ, ಮೈಸೂರು ನಿಗಮದ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಚಾವಿಸನಿನಿ, ಕಾರ್ಯ ಮತ್ತು ಪಾಲನಾ ವಿಭಾಗ,
5. ಆಪ್ತ ಸಹಾಯಕರು ವ್ಯವಸ್ಥಾಪಕ ನಿರ್ದೇಶಕರು/ತಾಂತ್ರಿಕ ಸಹಾಯಕರು ನಿರ್ದೇಶಕರು(ತಾಂತ್ರಿಕ)ಇವರ ಗಮನಕ್ಕೆ.

ಮುಖ್ಯ ಕಡತ/ಕ.ಪ್ರ.

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ),
ಚಾವಿಸನಿನಿ, ಮೈಸೂರು.